# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 569

ಮಾನ್ಯ ಸದಸ್ಯರ ಹೆಸರು : ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 24.09.2020

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕೆಲಸ ನಿರ್ವಹಿಸುತ್ತಿರುವ ಸರ್ಕಾರಿ ನೌಕರರ ಸಂಖ್ಯೆ ಎಷ್ಟು; | ರಾಜ್ಯದಲ್ಲಿ ಕೆಲಸ ನಿರ್ವಹಿಸುತ್ತಿರುವ ಸರ್ಕಾರಿ ನೌಕರರ ಸಂಖ್ಯೆ: 5,33,532. |
| ಆ) | ಇದರಲ್ಲಿ N.P.S. ಪಿಂಚಣಿ ವ್ಯವಸ್ಥೆಗೆ ಒಳಪಟ್ಟ ನೌಕರರ ಸಂಖ್ಯೆ ಎಷ್ಟು; | ನೂತನ ಪಿಂಚಣಿ ಯೋಜನೆಗೆ ಒಳಪಟ್ಟಿರುವ ನೌಕರರ ಸಂಖ್ಯೆ: 2,34,980. |
| ಇ) | N.P.S. ನ ಸಾಧಕ-ಭಾದಕ ಬಗ್ಗೆ ಪರಿಶೀಲಿಸಿ ವರದಿ ನೀಡಲು ಯಾವಾಗ ಸಮಿತಿಯನ್ನು ರಚಿಸಲಾಯಿತು; (ಮಾಹಿತಿ ನೀಡುವುದು) | ನೂತನ ಪಿಂಚಣಿ ಯೋಜನೆಗೆ ಸೂಕ್ತ ಬದಲಾವಣೆ / ಮಾರ್ಪಾಡು ಮಾಡಲು ಸರ್ಕಾರದ ಆದೇಶ ಸಂಖ್ಯೆ: ಆಇ 107 ಪಿಇಎನ್ 2018, ದಿನಾಂಕ: 11.12.2018 ರನ್ವಯ ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದೆ |
| ಈ) | ಈ ಸಮಿತಿಗೆ ಸರ್ಕಾರ ನಿಗಧಿಪಡಿಸಿದ ಕಾಲಮಿತಿ ಎಷ್ಟು; ಈ ಸಮಿತಿಯು ಎಷ್ಟು ಸಭೆಗಳನ್ನು ನಡೆಸಿದೆ; | ಈ ಸಮಿತಿಗೆ ಸರ್ಕಾರವು ಕಾಲಮಿತಿಯನ್ನು ನಿಗದಿಪಡಿಸಿರುವುದಿಲ್ಲ.<br><br>ಸಮಿತಿಯು ಒಂದು ಸಭೆಯನ್ನು ನಡೆಸಿದೆ. |
| ಉ) | ಈ ಸಮಿತಿಯು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದೆಯೇ; | ಸಮಿತಿಯು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುವುದಿಲ್ಲ. |
| ಊ) | ಇಲ್ಲವಾದಲ್ಲಿ, ಈ ಸಮಿತಿಯ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು; | ಸಮಿತಿಯ ವರದಿಯನ್ನು ನಿರೀಕ್ಷಿಸಲಾಗಿದೆ. |

| | | |
|---|---|---|
| ಋ) | N.P.S. ರದ್ದು ಪಡಿಸಿ O.P.S. ಯೋಜನೆಯನ್ನು ಜಾರಿಗೆ ತರುವಲ್ಲಿ ಸರ್ಕಾರದ ನೀಲುವೇನು? (ವಿವರ ನೀಡುವುದು) | ಕೇಂದ್ರ ಸರ್ಕಾರವು ಜಾರಿಗೊಳಿಸಿರುವ ನೂತನ ಪಿಂಚಣಿ ಯೋಜನೆಯನ್ವಯ ರಾಜ್ಯದಲ್ಲಿಯೂ ಈ ಯೋಜನೆಯನ್ನು 2006ರಿಂದ ಅಳವಡಿಸಿಕೊಳ್ಳಲಾಗಿದೆ. ಈಗ ಈ ಯೋಜನೆಯನ್ನು ರದ್ದುಪಡಿಸಿದರೆ ಸರ್ಕಾರದ ಆರ್ಥಿಕ ಸ್ಥಿತಿಯ ಮೇಲೆ ತೀವ್ರ ಪರಿಣಾಮ ಬೀರುವ ಸಂಭವವಿರುತ್ತದೆ. |

ಆಇ 95 ಪಿಇಎನ್ 2020

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ